ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

**ಅಧ್ಯಕ್ಷರು, ಆಯ್ಕೆ ಪ್ರಾಧಿಕಾರ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು**

ಸಂ: **MYSDC-EST2/VA (15) /1/2019 E- 70600** ದಿನಾಂಕ: 10 /07/2019

## ಅಧಿಸೂಚನೆ

ವಿಷಯ: 2019-20ನೇ ಸಾಲಿನಲ್ಲಿ ಮೈಸೂರು ಜಿಲ್ಲಾ ಕಂದಾಯ ಘಟಕದ ತಾಲ್ಲೂಕು ಕಛೇರಿಗಳಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 08 ಸೆಹಿಮ 95 ದಿನಾಂಕ: 20/06/1995
2. ಸರ್ಕಾರದ ಅಧಿಸೂಚನೆ ಸಂಖ್ಯೆ ಕಂಇ 299 ಬಿಎಸ್‌ಸಿ 2006 ದಿನಾಂಕ: 03/02/2009
3. ಸರ್ಕಾರದ ಅಧಿಸೂಚನೆ ಸಂಖ್ಯೆ ಕಂಇ 299 ಬಿಎಸ್‌ಸಿ 2006 ದಿನಾಂಕ: 24/07/2009
4. ಸರ್ಕಾರದ ಆದೇಶ ಸಿಆಸುಇ 128 ಸೆನೆನಿ 2006 ದಿನಾಂಕ: 01/08/2009
5. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 53 ಸೆನೆನಿ 2007 ದಿನಾಂಕ: 04/01/2008
6. ಸರ್ಕಾರದ ಆದೇಶ ಸಂಖ್ಯೆ 666 ಎಎಸ್‌ಡಿ 2012 (ಭಾಗ) ದಿನಾಂಕ: 04/07/2013
7. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 3 ಸೆಹಿಮ 2015 ದಿನಾಂಕ: 03/10/2015
8. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 143 ಸೆನೆನಿ 2015 ದಿನಾಂಕ: 08/01/2016
9. ಸರ್ಕಾರದ ಅ.ಸ.ಪತ್ರ ಸಂಖ್ಯೆ 103 ಬಿಎಸ್‌ಸಿ 2016 ದಿನಾಂಕ: 22/07/2016
10. ಈ ಕಾರ್ಯಾಲಯದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ MYSDC-EST1/RTD/07/2018 ದಿನಾಂಕ: 27/11/2016

*****

ಮೈಸೂರು ಜಿಲ್ಲಾ ಕಂದಾಯ ಘಟಕದ ವಿವಿಧ ತಾಲ್ಲೂಕು ಕಛೇರಿಗಳಲ್ಲಿ ಗ್ರೂಪ್ ಸಿ ವೃಂದದ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2019-20 ನೇ ಸಾಲಿನಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳ ನೇಮಕಾತಿ ಸಂಬಂಧದ ವಿವರ ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| 01 | ಹುದ್ದೆಯ ಹೆಸರು | : ಗ್ರಾಮಲೆಕ್ಕಿಗರು |
| 02 | ಒಟ್ಟು ಖಾಲಿ ಹುದ್ದೆಗಳ ಸಂಖ್ಯೆ | : 65 ಹುದ್ದೆಗಳು |
| 03 | ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ | : 05 ಹುದ್ದೆಗಳು |

04 ಒಟ್ಟು ಹೊಸ ಹುದ್ದೆಗಳ ಸಂಖ್ಯೆ : 70 ಹುದ್ದೆಗಳು

06 ಹುದ್ದೆಯ ಮೀಸಲಾತಿ ವರ್ಗೀಕರಣ : ಮೈಸೂರು ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳು –65 + 05 = 70 (ಬ್ಯಾಕ್‌ಲಾಗ್ ಹುದ್ದೆಗಳು ಸೇರಿ)

| ಕ್ರ.ಸಂ | ವರ್ಗೀಕರಣ | ಪ.ಜಾ | ಪ.ಪಂ | ಹಿಂಬಾಕಿ (ಪ–1) | ವರ್ಗ 1 | ಹಿಂಬಾಕಿ (ಪ–2ಎ) | ವರ್ಗ 2ಎ | ಪ–2ಬಿ | ಹಿಂಬಾಕಿ (ಪ–3ಎ) | ವರ್ಗ 3ಎ | ವರ್ಗ 3ಬಿ | ಸಾ. ಅ | ಒಟ್ಟು |
|---|---|---|---|---|---|---|---|---|---|---|---|---|---|
| 1 | ಸಾಮಾನ್ಯ | 2 | 0 | 0 | 0 | 0 | 2 | 0 | 0 | 0 | 2 | 5 | **11** |
| 2 | ಮಹಿಳೆ | 3 | 0 | 0 | 0 | 1 | 3 | 1 | 1 | 1 | 1 | 12 | **23** |
| 3 | ಗ್ರಾಮೀಣ | 2 | 1 | 0 | 1 | 0 | 2 | 1 | 0 | 1 | 0 | 8 | **16** |
| 4 | ಮಾಜಿ ಸೈನಿಕ | 1 | 0 | 0 | 0 | 2 | 1 | 0 | 0 | 0 | 1 | 4 | **9** |
| 5 | ಕನ್ನಡ ಮಾಧ್ಯಮ | 0 | 1 | 1 | 0 | 0 | 0 | 0 | 0 | 0 | 0 | 1 | **3** |
| 6 | ಯೋಜನಾ ನಿರಾಶ್ರಿತ | 1 | 0 | 0 | 1 | 0 | 1 | 1 | 0 | 1 | 0 | 1 | **6** |
| 7 | ಅಂಗವಿಕಲ | 0 | 0 | 0 | 0 | 0 | 0 | 0 | 0 | 0 | 0 | 2 | **2** |
| | ಒಟ್ಟು | **9** | **2** | **1** | **2** | **3** | **9** | **3** | **1** | **3** | **4** | **33** | **70** |

* ರೋಸ್ಟರ್ ಬಿಂದು **(Vertical)** : 60 ರಿಂದ ಪ್ರಾರಂಭಿಸಲಾಗಿದೆ

*ಅಂಗವಿಕಲ ಮೀಸಲಾತಿ ಅಂದರೆ

- ➢ ಸಾಮಾನ್ಯ ಅಭ್ಯರ್ಥಿ – 1) ಮಾನಸಿಕ ಅಸ್ವಸ್ಥತೆ / ಬುದ್ಧಿಮಾಂಧ್ಯತೆ/ ಕುಷ್ಠರೋಗದಿಂದ ನಿವಾರಣೆಯಾದವರು **( Mentally ill / Mental Retardation/ Leprosy Cured)**
- ➢ ಸಾಮಾನ್ಯ ಅಭ್ಯರ್ಥಿ – 2) ದೃಷ್ಟಿಮಾಂದ್ಯತೆ **( Blindness/ Low vision)**

Office of the Deputy Commissioner, Mysuru Dist. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ

08 ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ : **29/07/2019**

09 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **28/08/2019** ರಂದು **(ಸಂಜೆ 5–30 ಗಂಟೆವರೆಗೆ)**

10 ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆ : ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣ ಅಥವಾ ಸಿಬಿಎಸ್‌ಇ ಅಥವಾ ಐಸಿಎಸ್‌ಇ ಇವರು ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರತಕ್ಕದ್ದು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.

ಮೇಲ್ಕಂಡ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆಗಳನ್ನು ಹಾಗೂ ಮುಕ್ತ ವಿಶ್ವ ವಿದ್ಯಾಲಯದಿಂದ ಪಡೆದ ವಿದ್ಯಾರ್ಹತೆಯನ್ನು ಈ ಹುದ್ದೆಗೆ ಪರಿಗಣಿಸಲಾಗುವುದಿಲ್ಲ

ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

11 ಹುದ್ದೆಗೆ ನಿಗಧಿಪಡಿಸಿರುವ ವೇತನ ಶ್ರೇಣಿ : ರೂ:21400-500-22400-550-24600-600-27000-650-29600-750-32600-850-36000-950-39800-1100-42000

12 ಹುದ್ದೆಗೆ ನಿಗಧಿಪಡಿಸಿರುವ ವಯೋಮಿತಿ :

| ಕ್ರಮಸಂಖ್ಯೆ | ಮೀಸಲಾತಿ ವರ್ಗ | ವಯೋಮಿತಿ |
|---|---|---|
| 01 | ಸಾಮಾನ್ಯ | 18 ರಿಂದ 35 ವರ್ಷ |
| 02 | ಪ್ರವರ್ಗ-2ಎ, 2ಬಿ, 3ಎ, 3ಬಿ | 18 ರಿಂದ 38 ವರ್ಷ |
| 02 | ಪ್ರವರ್ಗ-1, ಪ.ಜಾ, ಪ.ಪಂ | 18 ರಿಂದ 40 ವರ್ಷ |

13 ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಶುಲ್ಕ :

| ಕ್ರಮ ಸಂಖ್ಯೆ | ಮೀಸಲಾತಿ ವರ್ಗ | ಶುಲ್ಕ | ಪಾವತಿಸುವ ವಿಧಾನ |
|---|---|---|---|
| 01 | ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ | ರೂ: 25/- | ಆನ್‌ಲೈನ್ / ಡೆಬಿಟ್ ಕಾರ್ಡ್ / ಕ್ರೆಡಿಟ್ ಕಾರ್ಡ್ / ಚಲನ್ ಹಾಗೂ ಇತ್ಯಾದಿಗಳ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕ್‌ಗೆ ಆನ್‌ಲೈನ್ ಮೂಲಕ ಜಮಾ ಮಾಡತಕ್ಕದ್ದು. |
| 02 | ಇತರೆ ಹಿಂದುಳಿದ ವರ್ಗಗಳು **(CAT-1, 2A, 2B, 3A, 3B)** | ರೂ: 150/- | |
| 03 | ಇತರೆ ಅಭ್ಯರ್ಥಿಗಳು | ರೂ: 300/- | |
| 04 | ಬ್ಯಾಂಕ್ ಶುಲ್ಕ ಪ್ರತ್ಯೇಕ | | |

14 ಹುದ್ದೆಯ ಆಯ್ಕೆ ವಿಧಾನ : ಅಭ್ಯರ್ಥಿಯು ದ್ವಿತೀಯ ಪಿಯುಸಿ / ಸಿಬಿಎಸ್‌ಇ / ಐಸಿಎಸ್‌ಇ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಮೆರಿಟ್ ಆಧಾರದಲ್ಲಿ ಮೀಸಲಾತಿಗೆ ಅನುಗುಣವಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ ಆರ್‌ಡಿ 299 ಬಿಎಸ್‌ಸಿ 2009 ದಿನಾಂಕ: 03-02-2009 ರನ್ವಯ ಆಯ್ಕೆ ಮಾಡಲಾಗುವುದು.

15 <u>ಹುದ್ದೆಗೆ ಆಯ್ಕೆ ಮಾಡಲು ನಿಬಂಧನೆಗಳು:</u>

1. ಅರ್ಹ ಅಭ್ಯರ್ಥಿಗಳು ಆನ್‌ಲೈನ್ (Online) ಮೂಲಕ ಮಾತ್ರ ಅರ್ಜಿ ಸಲ್ಲಿಸುವುದು. ಕಂಪ್ಯೂಟರ್ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡಿದ ತರುವಾಯ ಅಭ್ಯರ್ಥಿಯು ವೆಬ್‌ಸೈಟ್‌ನಲ್ಲಿರುವ "ಎಸ್‌ಬಿಐ ಕಲೆಕ್ಟ್" ಲಿಂಕ್ ಮುಖಾಂತರ ಅರ್ಜಿ ಶುಲ್ಕ ಪಾವತಿಸಿವುದು.
2. ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ಎಸ್‌ಬಿಐ ಬ್ಯಾಂಕ್‌ನಲ್ಲಿ <u>ದಿನಾಂಕ: 28/08/2019 ರಂದು</u> ಪಾವತಿಸಲು ಅಂತಿಮ ದಿನಾಂಕವಾಗಿರುತ್ತದೆ. ತದನಂತರ ಅರ್ಜಿ ಶುಲ್ಕ ಪಾವತಿಸಲು ಅವಕಾಶವಿರುವುದಿಲ್ಲ.
3. ಅರ್ಜಿಯನ್ನು ಆನ್‌ಲೈನ್ (Online) ಮೂಲಕವೇ ಸಲ್ಲಿಸತಕ್ಕದ್ದು. ಆನ್‌ಲೈನ್ (Online) **ವಿಳಾಸ** **<u>www.mysore-va.kar.nic.in</u> or <u>www.mysore.nic.in</u>** ಆನ್‌ಲೈನ್ ಅರ್ಜಿ **ದಿನಾಂಕ:** 29/07/2019 ರಿಂದ ಲಭ್ಯವಿರುತ್ತದೆ ಮತ್ತು **ದಿನಾಂಕ:** 28/07/2019 ರ **ಸಂಜೆ** 5-30 ಗಂಟೆವರೆಗೆ ಮಾತ್ರ ಲಭ್ಯವಾಗುವುದು. ಆನ್‌ಲೈನ್ (Online) ಹೊರತುಪಡಿಸಿ ಇತರೆ ಯಾವುದೇ ವಿಧದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಯಾವುದೇ ಮುನ್ಸೂಚನೆ ನೀಡದೇ ವಿಲೇ ಇಡಲಾಗುವುದು.
4. ಅಭ್ಯರ್ಥಿಯು ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ಅಂಕಪಟ್ಟಿಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.
5. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಇಲಾಖಾ ಮುಖ್ಯಸ್ಥರು ನೀಡಿರುವ ನಿರಾಪೇಕ್ಷಣಾ ಪತ್ರವನ್ನು ಹೊಂದಿರತಕ್ಕದ್ದು.
6. ಅಭ್ಯರ್ಥಿಯ ಜನ್ಮ ದಿನಾಂಕವನ್ನು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿಯ ಆಧಾರದ ಮೇಲೆ ಸಲ್ಲಿಸತಕ್ಕದ್ದು
7. ಮಾಜಿ ಸೈನಿಕ ಮೀಸಲಾತಿ ಹುದ್ದೆಗೆ ಸಂಬಂಧಿಸಿದಂತೆ, ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿರುವ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು ಹಾಗೂ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳ ಮೀಸಲಾತಿ

ಕೋರ ಬಯಸುವ ಅಭ್ಯರ್ಥಿಗಳು ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸುವುದು.

8. ಅಂಗವಿಕಲ ಮೀಸಲಾತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 115 ನೇಸನಿ 2005 ದಿನಾಂಕ: 19-11-2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.
9. ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್ಆರ್ಆರ್ 99 ದಿನಾಂಕ: 29-11-2002 ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ ಕಂಇ 100 ಬಿಎಸ್‌ಸಿ 2011 ದಿನಾಂಕ: 29-06-2012 ರಲ್ಲಿ ಗ್ರಾಮಲೆಕ್ಕಿಗರ ಹುದ್ದೆಗೆ ಆಯ್ಕೆ ಮಾಡಲು ಗುರುತಿಸಿರುವ ಅಂಗವಿಕಲತೆಯಾದ **(1) ದೃಷ್ಟಿಮಾಂದ್ಯ (Blindness/ Low vision) (2) ಶ್ರವಣದೋಷವುಳ್ಳವರು (Hearing Impaired) (3) ದೈಹಿಕ ಅಂಗವಿಕಲತೆ (Locomotor Disability) ಮತ್ತು (4) ಮಾನಸಿಕ ಅಸ್ವಸ್ಥತೆ (Mentally ill) / ಬುದ್ಧಿಮಾಂದ್ಯತೆ (Mental Retardation), ಕುಷ್ಠರೋಗದಿಂದ ನಿವಾರಣೆಯಾದವರು (Leprosy Cured)** ಅಂಗವಿಕಲತೆಗೆ ಮಾತ್ರ ಕಾಯ್ದಿರಿಸಲಾದ ಹುದ್ದೆಗಳಾಗಿರುತ್ತದೆ.
10. ಜಾತಿ ಮೀಸಲಾತಿ ಕೋರಬಯಸುವ ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ "ಡಿ" ಯಲ್ಲಿ, ಪ್ರವರ್ಗ -1 ರ ಅಭ್ಯರ್ಥಿಗಳು ನಮೂನೆ "ಇ" ಯಲ್ಲಿ ಹಾಗೂ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ "ಎಫ್" ರಲ್ಲಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ತಹಸೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಪಡೆದು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸುವುದು.
11. ಕನ್ನಡ ಮಾಧ್ಯಮ ಮತ್ತು ಗ್ರಾಮೀಣ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ 13-02-2001 ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 8 ಸೇಸನಿ 2001 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ಸಹಿಯನ್ನು ಪಡೆದು ಪ್ರಮಾಣ ಪತ್ರ ಹೊಂದಿರತಕ್ಕದ್ದು.
12. ಇಬ್ಬರು ಗಣ್ಯ ವ್ಯಕ್ತಿಗಳಿಂದ ಅಥವಾ ಪತ್ರಾಂಕಿತ ಅಧಿಕಾಗಳಿಂದ ಪಡೆದ ನಡತೆ ಪ್ರಮಾಣ ಪತ್ರ ಹೊಂದಿರತಕ್ಕದ್ದು.
13. ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.
14. ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು,
15. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿಬೇಕು.
16. ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಅಭ್ಯರ್ಥಿಯು ಹೊಂದಿರಬೇಕು, ಅಭ್ಯರ್ಥಿಯು ಗಣಕ ಯಂತ್ರಗಳ ಬಗ್ಗೆ ತಿಳುವಳಿಕೆ ಇರುವ ಬಗ್ಗೆ ದೃಢೀಕೃತ ಪ್ರಮಾಣ ಪತ್ರ ಹೊಂದಿರತಕ್ಕದ್ದು ಹಾಗೂ ಬೇಸಿಕ್ ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.
17. ನೇಮಕಾತಿ ಪ್ರಕ್ರಿಯೆ ಪ್ರಾರಂಭದ ದಿನಾಂಕದಿಂದ ನೇಮಕಾತಿ ಆದೇಶ ಹೊರಡಿಸುವವರೆಗೆ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ (Online) ಮಾಹಿತಿಯನ್ನು ಪಡೆದು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.
18. ನಿಗಧಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಮೀಸಲಾತಿಗನುಗುಣವಾಗಿ ಪರಿಶೀಲನಾ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳು ನಿಗಧಿತ ದಿನಾಂಕದಂದು ಮೂಲ ದಾಖಲಾತಿಗಳ ಪರಿಶೀಲನೆಗಾಗಿ ಹಾಜರಾಗಬೇಕಾಗುತ್ತದೆ.
19. ನಿಗಧಿತ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಮತ್ತು ಪರಿಶೀಲನಾ ಪಟ್ಟಿಯ ಅಭ್ಯರ್ಥಿಗಳಿಗೆ ಯಾವುದೇ ಪ್ರತ್ಯೇಕ ಸೂಚನಾ ಪತ್ರವನ್ನು ಕಾರ್ಯಾಲಯದಿಂದ ಕಳುಹಿಸುವುದಿಲ್ಲ.
20. ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಹಕ್ಕು ನೇಮಕಾತಿ ಪ್ರಾಧಿಕಾರಕ್ಕೆ ದತ್ತವಾಗಿರುತ್ತದೆ.

21. ಅಧಿಸೂಚನೆ ಪ್ರಕಟಿಸಿದ ದಿನಾಂಕದಿಂದ ಮಾರ್ಚ್ 2017 ರ ಅಂತ್ಯದವರೆಗೆ ಗ್ರಾಮಲೆಕ್ಕಿಗರ ಪದೋನ್ನತಿಯಿಂದ, ಸ್ವಯಂ ನಿವೃತ್ತಿಯಿಂದ, ವಯೋ ನಿವೃತ್ತಿಯಿಂದ ಅಥವಾ ಇನ್ನಾವುದೇ ವಿಧದಲ್ಲಿ ಖಾಲಿಯಾಗುವ ಹುದ್ದೆಗಳನ್ನು ಮೆರಿಟ್ ಆಧಾರದ ಮೇಲೆ ಮೀಸಲಾತಿಗನುಗುಣವಾಗಿ ಸದರಿ ಪಟ್ಟಿಯಿಂದ ನೇಮಕಾತಿ ಮಾಡುವ ಷರತ್ತಿಗೊಳಪಟ್ಟಿರುತ್ತದೆ.
22. ತಪ್ಪು ಮಾಹಿತಿ ಒದಗಿಸಿದ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
23. ಅರ್ಜಿಯನ್ನು ಸ್ವೀಕರಿಸಲು ನಿಗಧಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟಿದ್ದರೆ ಅಂತಹ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.
24. ಈ ಅಧಿಸೂಚನೆ ಅನ್ವಯ ನೇಮಕಾತಿ ಹೊಂದುವ ಅಭ್ಯರ್ಥಿಗಳು ಮೈಸೂರು ಜಿಲ್ಲೆಯ ಯಾವುದೇ ತಾಲ್ಲೂಕುಗಳಲ್ಲಾದರೂ ಸೇವೆ ಸಲ್ಲಿಸಲು ಬದ್ಧರಾಗಿರಬೇಕು.
25. ಅಭ್ಯರ್ಥಿಯು ಯಾವುದೇ ಒತ್ತಡ ತಂದಲ್ಲಿ ಅಂತಹ ಅಭ್ಯರ್ಥಿಯ ಬಗ್ಗೆ ಸರ್ಕಾರದ ನಿಯಮದಂತೆ ಕ್ರಮ ಕೈಗೊಳ್ಳಲಾಗುವುದು.
26. ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
27. ನೇಮಕಾತಿ ಹೊಂದಿದ ಅಭ್ಯರ್ಥಿಗಳು ಎರಡು (02) ವರ್ಷಗಳ ಪರಿವೀಕ್ಷಣಾ ಅವಧಿಯನ್ನು ಹಾಗೂ ಐದು (05) ವರ್ಷಗಳ ಸೇವೆಯನ್ನು ಮೈಸೂರು ಜಿಲ್ಲೆಯಲ್ಲಿಯೇ ಪೂರೈಸುವುದು ಕಡ್ಡಾಯವಾಗಿರುತ್ತದೆ.

(ಅಭಿರಾಮ್ ಜಿ ಶಂಕರ್)
ಅಧ್ಯಕ್ಷರು,
ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ,
ಮತ್ತು ಜಿಲ್ಲಾಧಿಕಾರಿ,
ಮೈಸೂರು ಜಿಲ್ಲೆ, ಮೈಸೂರು.

ಗೆ,

ಸಂಕಲನಾಧಿಕಾರಿಗಳು, ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಆರ್‌ವಿ ಕಾಲೇಜು ಅಂಚೆ, ಬೆಂಗಳೂರು 560059 ಇವರಿಗೆ ಕಳುಹಿಸುತ್ತಾ, ಸದರಿ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ರಾಜ್ಯಪತ್ರದ 50 ಪ್ರತಿಗಳನ್ನು ಈ ಕಾರ್ಯಾಲಯಕ್ಕೆ ಕಳುಹಿಸಿಕೊಡಲು ಕೋರಿದೆ.

ಪ್ರತಿಯನ್ನು : ಈ ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ : ಕಳುಹಿಸಿದೆ.

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಸೇವೆಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು
3. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ
4. ರಾಷ್ಟ್ರೀಯ ಸೂಚನಾ ವಿಜ್ಞಾನಾಧಿಕಾರಿಗಳು, ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ, ಜಿಲ್ಲಾ ಪಂಚಾಯತ್, ಮೈಸೂರು ಇವರಿಗೆ ಸದರಿ ಅಧಿಸೂಚನೆ ಮತ್ತು ವೇಳಾಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
5. ಶಾಖಾ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಯುನಿವರ್ಸಿಟಿ ಶಾಖೆ, ಕ್ರಾಫರ್ಡ್ ಭವನ, ಮೈಸೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6. ಉಪವಿಭಾಗಾಧಿಕಾರಿಗಳು, ಮೈಸೂರು : ಹುಣಸೂರು ಉಪವಿಭಾಗ ಇವರಿಗೆ ಕಳುಹಿಸುತ್ತಾ ಅಧಿಸೂಚನೆ ಯನ್ನು ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
7. ಜಿಲ್ಲೆಯ ಎಲ್ಲಾ ತಹಶೀಲ್ದಾರ್‌ರವರಿಗೆ ಕಳುಹಿಸುತ್ತಾ ಅಧಿಸೂಚನೆಯನ್ನು ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
8. ಶಾಖಾ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಯುನಿವರ್ಸಿಟಿ ಬ್ರಾಂಚ್, ಮೈಸೂರು
9. ಕಛೇರಿ ಪ್ರತಿ.